# ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನಲ್ಲಿ ಸಾಂಸ್ಕೃತಿಕ ವೇದಿಕೆಯಿಂದ ಹಮ್ಮಿಕೊಂಡಿರುವ ವಿದ್ಯಾರ್ಥಿನಿಯರ 'ಪ್ರತಿಭಾನ್ವೇಷಣೆ' ಕಾರ್ಯಕ್ರಮ

ವಿದ್ಯಾರ್ಥಿಗಳ ಸಮಗ್ರ ವ್ಯಕ್ತಿತ್ವ ವಿಕಸನಕ್ಕೆ ಪಠ್ಯೇತರ ಚಟುವಟಿಕೆಗಳು ಸಹಕಾರಿಯಾಗಲಿವೆ ಎಂದು ಮೈಸೂರು ವಿಶ್ವವಿದ್ಯಾನಿಲಯದ ಪರೀಕ್ಷಾಂಗ ಕುಲಸಚಿವ ಡಾ.ಆರ್.ರಾಜಣ್ಣ ತಿಳಿಸಿದರು.



ನಗರದ ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನಲ್ಲಿ ಸಾಂಸ್ಕೃತಿಕ ವೇದಿಕೆಯಿಂದ ಆಗಸ್ಟ್ 23 ಮತ್ತು 24ರಂದು ಹಮ್ಮಿಕೊಂಡಿರುವ ವಿದ್ಯಾರ್ಥಿನಿಯರ 'ಪ್ರತಿಭಾನ್ವೇಷಣೆ' ಕಾರ್ಯಕ್ರಮಕ್ಕೆ ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ವಿದ್ಯಾರ್ಥಿನಿಯರು ಕೇವಲ ಪಠ್ಯ ವಿಷಯಗಳಿಗೆ ಸೀಮಿತವಾಗಬಾರದು. ತಮ್ಮಲ್ಲಿರುವ ಸುಪ್ತ ಪ್ರತಿಭೆಗಳನ್ನು ಹೊರಹಾಕಿದಾಗ ಮಾತ್ರ ಸಮಾಜದ ಮುಖ್ಯವಾಹಿನಿಗೆ ಬರಲು ಸಾಧ್ಯ. ಅಂತಹ ಪ್ರತಿಭೆಗಳನ್ನು ಗುರುತಿಸುವ ಕೆಲಸ ಶಾಲಾಕಾಲೇಜು ಹಂತದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ನಡೆಯಬೇಕಿದೆ ಎಂದು ಅಭಿಪ್ರಾಯಪಟ್ಟರು.

ಪ್ರತಿಭೆಗಳನ್ನು ಗುರುತಿಸುವ ಮತ್ತು ಗೌರವಿಸುವ ಕೆಲಸ ಅಶೋಕನ ಕಾಲದಿಂದಲೂ ನಡೆದುಬಂದಿದೆ. ರಾಜಮಹಾರಾಜರು ಪ್ರತಿಭಾನ್ವಿತರಿಗೆ ಸೂಕ್ತ ವೇದಿಕೆ ಕಲ್ಪಿಸಿ ಬಿರುದುಗಳು, ದತ್ತಿಗಳನ್ನು ನೀಡಿ ಪ್ರೋತ್ಸಾಹಿಸುತ್ತಿದ್ದರು. ಇತ್ತೀಚಿನ ದಿನಗಳಲ್ಲಿ ಪ್ರತಿಭಾನ್ವಿತರಿಗೆ ಜಾಗತಿಕ ಮನ್ನಣೆಯಿದೆ. ಆದ್ದರಿಂದ ವಿದ್ಯಾರ್ಥಿನಿಯರು ಈ ಅವಕಾಶವನ್ನು ಬಳಸಿಕೊಂಡು ತಮ್ಮ ಪ್ರತಿಭೆಯನ್ನು ಹೊರಹಾಕಬೇಕು ಎಂದರು.

ಪ್ರಾಂಶುಪಾಲರಾದ ಡಾ.ಅಣ್ಣೇಗೌಡ ಅವರು ಅಧ್ಯಕ್ಷತೆವಹಿಸಿ ಮಾತನಾಡಿ, ನೃತ್ಯ, ಸಂಗೀತ ಮತ್ತು ಗಾಯನ ಭಾರತೀಯ ಸಂಸ್ಕೃತಿಯ ಪ್ರತೀಕವಾಗಿವೆ. ವಿದ್ಯಾರ್ಥಿನಿಯರು ತಮ್ಮಲ್ಲಿರುವ ವೈವಿಧ್ಯಮಯ ಪ್ರತಿಭೆಗಳನ್ನು ಹೊರಹಾಕಲು ಕಾಲೇಜಿನಿಂದ ಈ ವೇದಿಕೆ ಕಲ್ಪಿಸಿಕೊಡಲಾಗಿದೆ. ಎಲ್ಲರೂ ಇದರ ಪ್ರಯೋಜ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಾಂಸ್ಕೃತಿಕ ಸಮಿತಿ ಕಾರ್ಯದರ್ಶಿ ಪ್ರೊ.ಪಿ.ಶಿವಣ್ಣ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಲ್ಲ ಸಮಿತಿಗಳ ಪ್ರಧಾನ ಸಂಯೋಜಕರಾದ ಪ್ರೊ.ಎಂ.ಶಿವಣ್ಣ, ಅಧ್ಯಾಪಕ ಕಾರ್ಯದರ್ಶಿ ಪ್ರೊ.ಸೋಮಣ್ಣ, ಸಾಂಸ್ಕೃತಿಕ ವೇದಿಕೆ ಖಜಾಂಚಿ ಪ್ರೊ.ಎನ್.ನಾಗೇಂದ್ರ, ವಿದ್ಯಾರ್ಥಿ ಸಂಘದ ಅಧ್ಯಕ್ಷೆ ಕು.ಕೆ.ಸೌಮ್ಯ, ಕಾರ್ಯದರ್ಶಿ ಕು.ಮೇಘನ ಹಾಜರಿದ್ದರು.